# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್/27/2021-22 ದಿನಾಂಕ:04.12.2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)/ಪಿಆರ್/35/2020-21, ದಿ.16.04.2021ರ ಆದೇಶದಂತೆ ದಿ.04.12.2021 ರಂದು ನಡೆದ ಬಾಗಲಗುಂಟೆ ವಾರ್ಡ್ ನಂ.14ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-**

**ಸಭೆಗೆ ಹಾಜರಾಗಿದ್ದವರ ವಿವರಗಳು:-**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1 | ಶ್ರೀ.ಕೆ.ಮರುಳಸಿದ್ದಪ್ಪ | ಕಾರ್ಯಪಾಲಕ ಅಭಿಯಂತರರು, ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು |
| 2 | ಶ್ರೀ.ವೆಂಕಟೇಶಪ್ಪ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್ ನಂ.14, ಬಾಗಲಗುಂಟೆ |
| 3 | ಶ್ರೀ.ಡಾ\|\|ವರುಣ್ | ಕೋವಿಡ್ ಮೆಡಿಕಲ್ ಆಫೀಸರ್, ಪ್ರಾಥಮಿಕ ಆರೋಗ್ಯ ಕೇಂದ್ರ, ಬಾಗಲಗುಂಟೆ |
| 4 | ಶ್ರೀ.ಮೋಹನ್ ಗೌರೋಜಿ | ಹಿರಿಯ ಆರೋಗ್ಯ ನಿರೀಕ್ಷಕರು |
| 5 | ಶ್ರೀ.ಶಿವಲಿಂಗಯ್ಯ | ಕಂದಾಯ ಪರಿವಿಕ್ಷಕರು |
| 6 | ಶ್ರೀ.ರವಿಕುಮಾರ್ | ವಾಟರ್ ಇನ್ಸ್‌ಪೆಕ್ಟರ್, ಬಿ.ಡಬ್ಲ್ಯೂ.ಎಸ್.ಎಸ್.ಬಿ ಬಾಗಲಗುಂಟೆ |
| 7 | ಶ್ರೀ.ವೇಣುಗೋಪಾಲ್ | ನಾಗರೀಕ ಹಿತ ರಕ್ಷಣಾ ಸಮಿತಿ |
| 8 | ಶ್ರೀ.ಸದಾಶಿವ | ನಾಗರೀಕ ಹಿತ ರಕ್ಷಣಾ ಸಮಿತಿ, ಎಂ.ಇ.ಐ ಬಡಾವಣೆ |
| 9 | ಶ್ರೀ.ಮುದ್ದಹನುಮೇಗೌಡ | ನಾಗರೀಕ ಹಿತ ರಕ್ಷಣಾ ಸಮಿತಿ ಸದಸ್ಯರು, ಸಿಡೇದಹಳ್ಳಿ |
| 10 | ಶ್ರೀ.ಚೈತ್ರ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ.ಆದರ್ಶ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ |
| 12 | ಶ್ರೀ.ಶಿವಲಿಂಗೇಗೌಡ | ತೋಟಗಾರಿಕೆ ಇಲಾಖೆ |

ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು, ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ, ಬಾಕಿ ಇರುವ ಕುಂದು ಕೊರತೆಗಳನ್ನು ಆಧ್ಯತೆಯ ಮೇಲೆ ಪೂರೈಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಪಟ್ಟ ವಿಷಯದ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಚರ್ಚಿಸಲು ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಅಭಿಯಂತರರಾದ ಶ್ರೀ.ಆದರ್ಶ್‌ರವರು ಸಭೆಗೆ ಹಾಜರಿರುತ್ತಾರೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಹಲವಾರು ಬಡಾವಣೆಗಳಲ್ಲಿ ಪೈಪ್‌ಲೈನ್, ಸ್ಯಾನಿಟರಿ ಪೈಪ್ ಅಳವಡಿಸಲು ಅಗೆದಿರುವ ತುರ್ತಾಗಿ ಮುಚ್ಚಿಕೊಡಲು ಕೋರಲಾಯಿತು.

ಕ್ರಮ:ಸಹಾಯಕ ಅಭಿಯಂತರರು ವಾ-14/ಸದಸ್ಯ ಕಾರ್ಯದರ್ಶಿ

- **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಮೊದಲನೇ ಹಂತದ ಕೋವಿಡ್ ವ್ಯಾಕ್ಸಿನ್ ಚುಚ್ಚುಮದ್ದು 97% ಪೂರ್ಣಗೊಂಡಿರುತ್ತದೆ ಹಾಗೂ ಎರಡನೇ ಹಂತದಲ್ಲಿ 75% ಪೂರ್ಣಗೊಂಡಿರುತ್ತದೆ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಂಬಂಧಿಸಿದಂತೆ, ಆರೋಗ್ಯ ಪರಿವೀಕ್ಷಕರು ಈ ಕೆಳಕಂಡಂತೆ ಮಾಹಿತಿ ಒದಗಿಸಿದರು.

| | |
|---|---|
| ಒಟ್ಟು ಪ್ರಕರಣಗಳು | 7353 |
| ಬಿಡುಗಡೆಯಾದ ಪ್ರಕರಣಗಳು | 7194 |
| ಸಕ್ರಿಯ ಪ್ರಕರಣಗಳು | 03 |
| ಮರಣ | 156 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. |

ಕ್ರಮ: ಕೋವಿಡ್ ಆರೋಗ್ಯ ವೈಧ್ಯಾಧಿಕಾರಿಗಳು/ ಹಿರಿಯ ಆರೋಗ್ಯ ಪರಿವೀಕ್ಷಕರು

- **ಘನತ್ಯಾಜ್ಯ ನಿರ್ವಹಣೆ ಬಗ್ಗೆ.**

ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಅಸಮರ್ಪಕವಾಗಿರುವ ಬಗ್ಗೆ ವಾರ್ಡ್ ಸಮಿತಿ ಸದಸ್ಯರು ತಮ್ಮ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಈ ಬಗ್ಗೆ ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಘನತ್ಯಾಜ್ಯ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಸಂಬಂಧಿಸಿದಂತೆ ಕ್ರಮವಹಿಸುವುದಾಗಿ ಸಭೆಗೆ ತಿಳಿಸಿದರು.

ಕ್ರಮ:ಸ.ಕಾ.ನಿ.ಅ (ಘ.ತ್ಯಾ.ನಿ)/ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು

- **ಬೃಹತ್ ಮಳೆ ನೀರುಗಾಲುವೆ ಬಗ್ಗೆ:**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಬೃಹತ್ ಮಳೆನೀರು ಗಾಲುವೆಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿ ಸಸದಸ್ಯರು ಬಾಗಲಗುಂಟೆ ವ್ಯಾಪ್ತಿಯ ರಾಯಲ್ ಎನ್‌ಕ್ಲೇವ್ & ಬಿ.ಟಿ.ಎಸ್ ಬಡಾವಣೆಯಲ್ಲಿನ ಮಳೆನೀರು ಚರಂಡಿಗಳಲ್ಲಿ ಇನ್ನು 4 ರಿಂದ 5 ಅಡಿ ಆಳದಷ್ಟು ಹೂಳು ತುಂಬಿದ್ದು, ಸದರಿ ಹೂಳನ್ನು ತೆಗೆಯಲು ಕ್ರಮವಹಿಸಬೇಕೆಂದು ಕೋರಿದರು. ಸಭೆಯಲ್ಲಿ ಈ ಕುರಿತು ವಿವರವಾಗಿ ಚರ್ಚಿಸಿ ನಗರದಲ್ಲಿ ಇತ್ತೀಚಿಗೆ ಭಾರಿ ಪ್ರಮಾಣದಲ್ಲಿ ಮಳೆ ಆಗುತ್ತಿದ್ದು, ಮಳೆಯಿಂದ ಉಂಟಾಗುವ ಅನಾಹುತಗಳನ್ನು ತಡೆಯಲು ಕೂಡಲೇ ಮಳೆ ನೀರು ಚರಂಡಿಯಲ್ಲಿನ ಹೂಳನ್ನು ತೆಗೆಯಲು ಕ್ರಮವಹಿಸುವುದರ ಬಗ್ಗೆ ಚರ್ಚಿಸಲಾಯಿತು.

ಕ್ರಮ:ಸ.ಅ/ಸ.ಕಾ.ನಿ.ಅ(ಬೃಹತ್ ಮಳೆ ನೀರುಗಾಲುವೆ)

- **ಇತರೆ ವಿಷಯಗಳ ಬಗ್ಗೆ.**

ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳ ಬಗ್ಗೆ ಅನಧಿಕೃತವಾಗಿ ರಸ್ತೆಯನ್ನು ಕತ್ತರಿಸುವ ಬಗ್ಗೆ, ಪಾದಚಾರಿ ಮಾರ್ಗಗಳ ಒತ್ತುವರಿ ಬಗ್ಗೆ, ವಾರ್ಡ್ ವ್ಯಾಪ್ತಿಯಲ್ಲಿ ಹೂಳು ತುಂಬಿರುವ ಬಗ್ಗೆ ವಿವರವಾಗಿ ಚರ್ಚಿಸಲಾಯಿತು. ಈ ಕುರಿತು ಪರಿಶೀಲಿಸಿ ಆಧ್ಯತೆಯ ಮೇಲೆ ಕ್ರಮವಹಿಸುವುದರ ಬಗ್ಗೆ ತಿಳಿಸಲಾಯಿತು.

ಬಾಗಲಗುಂಟೆ ವಾರ್ಡ್ 14ರ ವ್ಯಾಪ್ತಿಯಲ್ಲಿ ಈಗಾಗಲೇ ಬಾಗಲಗುಂಟೆ ಮುಖ್ಯರಸ್ತೆ, ಬಾಗಲಗುಂಟೆ ಮುಖ್ಯರಸ್ತೆಯ ಎಲ್ಲಾ ಅಡ್ಡರಸ್ತೆಗಳು, ಮಾರಮ್ಮ ದೇವಸ್ಥಾನದ ಎದುರು ಮುಖ್ಯರಸ್ತೆ, ನಿಸರ್ಗ ಬಡಾವಣೆ, ವಿಶ್ವೇಶ್ವರಯ್ಯ ಬಡಾವಣೆ, ಭೈರವೇಶ್ವರನಗರ, ಹಾಗೂ ಇತರೆ ಬಡಾವಣೆಗಳಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಿ, ಡಾಂಬರು ಹಾಕಲಾಗಿದೆ ಹಾಗೂ ಬಾಕಿ ಉಳಿದ ಗುಂಡಿಗಳಿಗೆ ವೆಟ್‌ಮಿಕ್ಸ್ ಹಾಕಿ ಮುಚ್ಚಲಾಗಿದೆ, ವೆಟ್‌ಮಿಕ್ಸ್ ಹಾಕಿ ಮುಚ್ಚಿರುವ ಗುಂಡಿಗಳಿಗೆ ಡಾಂಬರು ಹಾಕಲು ಸೂಚಿಸಲಾಯಿತು ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

ಕ್ರಮ:ಸ.ಅ ವಾ.14/ ಸ.ಕಾ.ನಿ.ಅ (ದಾಸರಹಳ್ಳಿ ಉಪ-ವಿಭಾಗ)

**ಸಹಾಯಕ ಅಭಿಯಂತರರು**
**ಹಾಗೂ ಸದಸ್ಯ ಕಾರ್ಯದರ್ಶಿ ವಾರ್ಡ್ ಸಮಿತಿ**

**ನೋಡಲ್ ಅಧಿಕಾರಿ ಹಾಗೂ**
**ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ**
**ಮತ್ತು ಕಾರ್ಯಪಾಲಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧಿಕಾರಿಗಳ ಮಾಹಿತಿಗಾಗಿ:-**

1) ಸನ್ಮಾನ್ಯ ಶ್ರೀ.ಆರ್.ಮಂಜುನಾಥ್ ರವರು, ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರ ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿ.ಬಿ.ಎಂ.ಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
3) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
4) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
5) ಆರೋಗ್ಯ ವೈಧ್ಯಾಧಿಕಾರಿಗಳು (ದಾಸರಹಳ್ಳಿ) ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ವಲಯ ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
9) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಕಳುಹಿಸಿದೆ.
12) ಹಿರಿಯ / ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 14 ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13) ಕಲ್ಯಾಣಾಧಿಕಾರಿಗಳು (ದಾವ) ಬಿಬಿಎಂಪಿ ರವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14) ಕಛೇರಿ ಪ್ರತಿ.